3) ಪ್ರಸ್ತುತ ಎಷ್ಟು ಪಶು ಚಿಕಿತ್ಸಾ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಯೋಜನೆ ಸರ್ಕಾರದ ತೀರ್ಮಾನದಲ್ಲಿದೆ: ಯಾವಾಗ ಮೇಲ್ದರ್ಜೆಗೇರಿಸಲಾಗುವುದು?

ಶ್ರೀ ಎ.ಕೃಷ್ಣಪ್ಪ (ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು):

1) ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

2) ಕೆಲವು ಸಾರ್ವಜನಿಕ ಉದ್ದಿಮೆಗಳಿಂದ ಔಷಧಿ ಖರೀದಿಸಲು ಕ್ರಮ ವಹಿಸಲಾಗಿದೆ. ದರ ಗುತ್ತಿಗೆ ಬಗ್ಗೆ ಸದ್ಯದಲ್ಲಿಯೇ ಟೆಂಡರ್ ಕರೆಯಲಾಗುವುದು. ಔಷಧಿ ಖರೀದಿಗೆ ವಂಟನ ಹೆಚ್ಚಿಸುವ ಬಗ್ಗೆ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

3) ಈ ಸಾಲಿನ ಕಾರ್ಯಕ್ರಮದಂತೆ 200ರವರೆಗೆ ಪಶು ಚಿಕಿತ್ಸಾ ಕೇಂದ್ರಗಳನ್ನು ಪಶು ಚಿಕಿತ್ಸಾಲಯಗಳನ್ನಾಗಿ ಮೇಲ್ದರ್ಜೆಗೇರಿಸಲು ನಿರೀಕ್ಷಿಸಲಾಗಿದೆ.

ಪ್ರದೇಶಾಭಿವೃದ್ಧಿ ನಿಗಮಗಳಿಗೆ ಹಣ ಬಿಡುಗಡೆ.

1544(2269)

ಶ್ರೀ ಜೆ.ಟಿ.ಪಾಟೀಲ್(ಬೀಳಗಿ): ಮಾನ್ಯ ಮಿನುಗಾರಿಕೆ, ಬಂದರು ಮತ್ತು ಪ್ರದೇಶಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2000-2001ನೇ ಸಾಲಿನಲ್ಲಿ ಬಯಲು ಸೀಮೆ, ಹೈದರಾಬಾದ್ ಕರ್ನಾಟಕ ಹಾಗೂ ಮಲೆನಾಡು ಅಭಿವೃದ್ಧಿ ನಿಗಮಗಳಿಗೆ ಪ್ರತಿಯೊಂದಕ್ಕೆ ಬಿಡುಗಡೆ ಮಾಡಿದ ಹಣವೆಷ್ಟು?

ಆ) ಈ ಮೂರು ಮಂಡಳಿಗಳಲ್ಲಿ ಯಾವ ಮಂಡಳಿ ಹೆಚ್ಚು ಕ್ಷೇತ್ರವನ್ನು ವ್ಯಾಪಿಸಿಕೊಂಡಿರುತ್ತದೆ: (ವಿವರ ನೀಡುವುದು)

ಇ) ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ತಾರತಮ್ಯ ಮಾಡಲು ಸಕಾರಣಗಳೇನು ವಿವರ ನೀಡುವುದು?

ಶ್ರೀ ಬಿ.ರಮಾನಾಥ ರೈ (ಮಿನುಗಾರಿಕೆ, ಬಂದರು ಮತ್ತು ಪ್ರದೇಶಾಭಿವೃದ್ಧಿ ಸಚಿವರು):

ಅ) ಹಣ ಬಿಡುಗಡೆಯಾಗಿರುವುದು (ಲಕ್ಷ ರೂ.ಗಳಲ್ಲಿ)

1) ಹೈದರಾಬಾದ್ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ: 5889.50

2) ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ : 3256.00

3) ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ : 660.00

ಆ) ಕ್ಷೇತ್ರಗಳ ಸಂಖ್ಯೆ

1) ಹೈದರಾಬಾದ್ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ : 39

2) ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ : 71

3) ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ : 76

ಇ) ಯಾವುದೇ ರೀತಿಯ ತಾರತಮ್ಯವಿರುವುದಿಲ್ಲ.

ರಾಜ್ಯದಲ್ಲಿ ಕ್ರೀಡಾಂಗಣಗಳ ಕೊರತೆ.

1545(2270)

ಶ್ರೀ ಪಾಟೀಲ್ ಜೆ.ಟಿ.(ಬೀಳಗಿ): ಮಾನ್ಯ ಯುವಜನ ಸೇವೆಗಳು ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಇದುವರೆವಿಗೂ ಕ್ರೀಡಾಂಗಣವಾಗದೇ ಇರುವ ತಾಲ್ಲೂಕುಗಳೆಷ್ಟು? ಮಾಹಿತಿ ನೀಡುವುದು.

ಆ) ಕ್ರೀಡಾಂಗಣ ಆಗದೇ ಇರುವ ತಾಲ್ಲೂಕು ಸ್ಥಳಗಳಲ್ಲಿ ಕ್ರೀಡಾಂಗಣ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು).

ಶ್ರೀ ಎಸ್.ಎಸ್.ಮಲ್ಲಿಕಾರ್ಜುನ್ (ಯುವಜನ ಸೇವೆಗಳು ಮತ್ತು ಕ್ರೀಡಾ ರಾಜ್ಯ ಸಚಿವರು):

ಅ) 61 ವಿವರಗಳನ್ನು ಅನುಬಂಧದಲ್ಲಿ ಲಗತ್ತಿಸಿದೆ.

ಆ) ಕ್ರೀಡಾಂಗಣ ಆಗದೇ ಇರುವ ತಾಲ್ಲೂಕು ಸ್ಥಳಗಳಲ್ಲಿ ಕ್ರೀಡಾಂಗಣ ನಿರ್ಮಿಸಲು ಸೂಕ್ತ ನಿವೇಶನವನ್ನು ಹುಡುಕಲಾಗುತ್ತಿದೆ. ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕಾಗಿ 8 ಎಕರೆ ನಿವೇಶನ ಅವಶ್ಯಕತೆ ಇದೆ. ನಿವೇಶನವನ್ನು ತಾಲ್ಲೂಕು ಕೇಂದ್ರಗಳಲ್ಲಿ ಕ್ರೀಡಾಪಟುಗಳು ಹಾಗೂ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ಸ್ಥಳದಲ್ಲಿ ಪಡೆಯಲು ಪ್ರಯತ್ನಿಸಲಾಗುತ್ತಿದೆ. ಈ ನಿವೇಶನವನ್ನು ಉಚಿತವಾಗಿ